ಕರ್ನಾಟಕ ಸರ್ಕಾರ – ಅರಣ್ಯ ಇಲಾಖೆ

ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಮುಖ್ಯಸ್ಥರು, ಅರಣ್ಯ ಪಡೆ) ಹಾಗೂ ಆಯ್ಕೆ ಪ್ರಾಧಿಕಾರ
ಇವರ ಕಛೇರಿ, ಅರಣ್ಯ ಭವನ, ಮಲ್ಲೇಶ್ವರಂ, ಬೆಂಗಳೂರು–560003

# ಪ್ರಕಟಣೆ

ಅಧಿಸೂಚನೆ ಸಂಖ್ಯೆ: ಬಿ9–ವಲಅ–ವಿವ–1/2012–13 ದಿನಾಂಕ 12–09–2012

## ವಲಯ ಅರಣ್ಯಾಧಿಕಾರಿ ಹುದ್ದೆಗಳಿಗೆ ನೇರ ನೇಮಕಾತಿ

–0–

62 ವಲಯ ಅರಣ್ಯಾಧಿಕಾರಿ ಹುದ್ದೆಗಳಿಗೆ ಅಭ್ಯರ್ಥಿಗಳನ್ನು ಆಯ್ಕೆ ಮಾಡುವ ಸಂಬಂಧ 1:2 (ಹುದ್ದೆ:ಅಭ್ಯರ್ಥಿ) ಅನುಪಾತದ ಅಂತಿಮ ಪಟ್ಟಿಯನ್ನು ಸ್ವೀಕರಿಸಲಾಗುವ ಎಲ್ಲಾ ಆಕ್ಷೇಪಣೆಗಳನ್ನು ನಿಯಮಾನುಸಾರ ಪರಿಗಣಿಸಿ, ದಿನಾಂಕ 12–08–2014 ರಂದು ಪ್ರಕಟಿಸಲಾಗುವುದು. ಅಂತಿಮ 1:2 (ಹುದ್ದೆ:ಅಭ್ಯರ್ಥಿ) ಪಟ್ಟಿಯಲ್ಲಿರುವ ಅಭ್ಯರ್ಥಿಗಳು ವೈದ್ಯಕೀಯ ಪರೀಕ್ಷೆ, ಮೂಲ ದಾಖಲೆಗಳ ಪರಿಶೀಲನೆ, ದೈಹಿಕ ತಾಳ್ವಿಕೆ (ಕಾಲ್ನಡಿಗೆ ಪರೀಕ್ಷೆ) ಯನ್ನು ದಿನಾಂಕ 18–8–2014 ರಂದು ಪೂರ್ವಾಹ್ನ 7.30 ಗಂಟೆಗೆ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಧಾರವಾಡ ವೃತ್ತ, ಧಾರವಾಡ ಇವರ ಕಚೇರಿಯಲ್ಲಿ ನಡೆಸಲಾಗುವುದು. ಆದ್ದರಿಂದ 1:2 (ಹುದ್ದೆ:ಅಭ್ಯರ್ಥಿ) ಅಂತಿಮ ಪಟ್ಟಿಯಲ್ಲಿರುವ ಅಭ್ಯರ್ಥಿಗಳು ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಧಾರವಾಡ ವೃತ್ತ, ಧಾರವಾಡ ಇವರ ಸಮ್ಮುಖದಲ್ಲಿ ಮೇಲ್ಕಂಡ ದಿನಾಂಕ ಹಾಗೂ ಸಮಯಕ್ಕೆ ಸರಿಯಾಗಿ ಹಾಜರಾಗುವಂತೆ ತಿಳಿಸಿದೆ. ಈ ಪರೀಕ್ಷೆಗಳು ಒಂದು ದಿನಕ್ಕಿಂತ ಹೆಚ್ಚಿನ ದಿನಗಳು ನಡೆಯುವುದರಿಂದ ಅಭ್ಯರ್ಥಿಗಳು ಈ ಬಗ್ಗೆ ಎಲ್ಲಾ ಪೂರ್ವ ಸಿದ್ಧತೆಯನ್ನು ಮಾಡಿಕೊಳ್ಳಲು ತಿಳಿಸಲಾಗಿದೆ. ಅಭ್ಯರ್ಥಿಗಳು ತಮ್ಮ ಇತ್ತೀಚಿನ 3 ಭಾವಚಿತ್ರ ಹಾಗೂ ಅರ್ಜಿಯಲ್ಲಿ ನಮೂದಿಸಿರುವ ಎಲ್ಲಾ ಮೂಲ ದಾಖಲೆಗಳು ಹಾಗೂ ಅವುಗಳ ಒಂದು ಜೆರಾಕ್ಸ್ ಪ್ರತಿಯೊಂದಿಗೆ ಹಾಜರಾಗಲು ತಿಳಿಸಿದೆ. ಈ ಮಾಹಿತಿಯನ್ನು ಇಲಾಖಾ website: www.aranya.gov.in ನಲ್ಲಿ ನೋಡಬಹುದು.

ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ
(ಮುಖ್ಯಸ್ಥರು, ಅರಣ್ಯ ಪಡೆ)
ಹಾಗೂ ಆಯ್ಕೆ ಪ್ರಾಧಿಕಾರ.

ಬೆಂಗಳೂರು,
ದಿನಾಂಕ: 06–08–2014